# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:133 RNI NO.KAR KAN/2003/10452:No./PMG/KA/NK/BM/743/24-26 ರವಿವಾರ ದಿನಾಂಕ: 21-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಪ್ರಧಾನಿ ಹುದ್ದೆಯಿಂದ ಕೆಳಗಿಳಿಸಲು ಸಂಚು, ಆದ್ರೆ ನನಗೆ ದೇಶದ ತಾಯಂದಿರ ಆಶೀರ್ವಾದ ಇದೆ: ಪ್ರಧಾನಿ ಮೋದಿ




ಚಿಕ್ಕಬಳ್ಳಾಪುರ: ನನ್ನನ್ನು ಪ್ರಧಾನಿ ಹುದ್ದೆಯಿಂದ ಕೆಳಗಿಳಿಸಲು ದೊಡ್ಡ ದೊಡ್ಡ ನಾಯಕರು ಯತ್ನಿಸುತ್ತಿದ್ದಾರೆ. ಅದಕ್ಕಾಗಿ ದೊಡ್ಡ ಮಟ್ಟದಲ್ಲಿ ಸಂಚು ನಡೆಯುತ್ತಿದೆ. ಆದರೆ, ನನಗೆ ದೇಶದ ತಾಯಂದಿರ ಆಶೀರ್ವಾದ ಇದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಶನಿವಾರ ಹೇಳಿದ್ದಾರೆ.
ಇಂದು ಚಿಕ್ಕಬಳ್ಳಾಪುರ ತಾಲೂಕಿನ ಅಗಲಗುರ್ಕಿ ಬಳಿ ಬಿಜೆಪಿ ಸಮಾವೇಶದಲ್ಲಿ ಮಾತನಾಡಿದ ಪ್ರಧಾನ ಮೋದಿ, ವಿಕಸಿತ ಭಾರತಕ್ಕಾಗಿ ಎನ್‌ಡಿಎ ಅಭ್ಯರ್ಥಿಗಳನ್ನು ಬೆಂಬಲಿಸಿ. ಕರ್ನಾಟಕದ ಅಭಿವೃದ್ಧಿಗೆ ಕೇಂದ್ರದ ಎನ್‌ಡಿಎ ಸರ್ಕಾರ ಬದ್ಧವಾಗಿದೆ. ಕರ್ನಾಟಕದ ಉಜ್ವಲ ಭವಿಷ್ಯಕ್ಕಾಗಿ ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿ ಎಂದು ಮನವಿ ಮಾಡಿದರು.
ಇದೇ ವೇಳೆ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಪ್ರಧಾನ ಮೋದಿ, ಈ ಹಿಂದೆ ಕರ್ನಾಟಕದಲ್ಲಿ ಬಿಜೆಪಿ ಸರ್ಕಾರ ಇದ್ದಾಗ ಕಿಸಾನ್ ಸಮ್ಮಾನ್ ಹಣದ ಜತೆಗೆ 2,000 ರೂ. ಸೇರಿಸಿ 4,000 ರೂಪಾಯಿಯನ್ನು ರೈತರಿಗೆ ನೀಡಲಾಗುತ್ತಿತ್ತು. ಆದರೆ, ಕಾಂಗ್ರೆಸ್ ಅಧಿಕಾರಕ್ಕೆ ಬಂದ ಕೂಡಲೇ ಅದನ್ನು ಸ್ಥಗಿತಗೊಳಿಸಲಾಯಿತು. ಇದರಿಂದಲೇ ಕಾಂಗ್ರೆಸ್ ರೈತ ವಿರೋಧಿ ಎಂಬುದು ಗೊತ್ತಾಗುತ್ತದೆ. ರೈತ ವಿರೋಧಿ ಕಾಂಗ್ರೆಸ್‌ಗೆ ಇಲ್ಲಿನ ಜನ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದರು.
ಕೇಂದ್ರ ಸರ್ಕಾರದ ಯೋಜನೆಗಳ ಬಗ್ಗೆ ಜನತೆಗೆ ಮಾಹಿತಿ ನೀಡಿದ ಪ್ರಧಾನ ಮೋದಿ, ನಾವು ಉಚಿತವಾಗಿ ಪಡಿತರ ನೀಡುತ್ತಿದ್ದೇವೆ, ಇದು ಮೋದಿ ಗ್ಯಾರಂಟಿ ಮತ್ತು ಮುಂದಿನ 5 ವರ್ಷವೂ ಉಚಿತವಾಗಿ ಪಡಿತರ ನೀಡುತ್ತೇವೆ ಎಂದು ಭರವಸೆ ನೀಡಿದರು.
ಉಚಿತವಾಗಿ ಬಡವರಿಗೆ ವೈದ್ಯಕೀಯ ಚಿಕಿತ್ಸೆ ಸಿಗಬಹುದು ಎಂದು ಯಾರೂ ಭಾವಿಸಿರಲಿಲ್ಲ. ಆದರೆ ಆಯುಷ್ಮಾನ್ ಭಾರತ್ ಯೋಜನೆ ಮೂಲಕ ನಾವು ಅದನ್ನು ಸಾಕಾರಗೊಳಿಸಿದ್ದೇವೆ. ಮೋದಿ ಸರ್ಕಾರದ ಅತಿದೊಡ್ಡ ಫಲಾನುಭವಿಗಳು ಎಸ್?ಸಿ, ಎಸ್?ಟಿ ಜನಾಂಗ ಹಾಗೂ ಬಡವರಾಗಿದ್ದಾರೆ.
ಕಳೆದ 10 ವರ್ಷಗಳಲ್ಲಿ ಎಸ್‌ಸಿ-ಎಸ್‌ಟಿ ಸಮುದಾಯದ 25 ಕೋಟಿ ಮಂದಿಯನ್ನು ಬಡತನ ರೇಖೆಯಿಂದ ಮೇಲೆ ತಂದಿದ್ದೇವೆ ಎಂದರು.


## ಲವ್ ಜಿಹಾದ್ ನಿರಂತರವಾಗಿ ನಡೆಯುತ್ತಿದೆ: ಮನವಳ್ಳಿ ಪಟ್ಟಣದಲ್ಲಿ ಜಗದೀಶ್ ಶೆಟ್ಟರ್




ಬೆಳಗಾವಿ: ಲವ್ ಜಿಹಾದ್ ಹೆಸರಲ್ಲಿ ಒಂದು ಗುಂಪಿಗೆ ತರಬೇತಿ ಕೊಟ್ಟಿದ್ದಾರೆ. ಇದು ಎನ್‌ಐಎ ತನಿಖೆ ಆಗುವ ಮೂಲಕ ಮತಾಂತರ ಗುಂಪನ್ನು ಹೊರ ಹಾಕುವ ಕೆಲಸ ಮಾಡಬೇಕು.
ಎನ್‌ಐಎ ಕೂಡ ಪ್ರಕರಣದ ಬಗ್ಗೆ ಮಾಹಿತಿ ಪಡೆಯುತ್ತಿದ್ದಾರೆ. ಇದರಲ್ಲಿ ಒಬ್ಬ ವ್ಯಕ್ತಿ ಇಲ್ಲಾ ಇನ್ನೂ ಐದು ಜನ ಆರೋಪಿ ಇದ್ದಾರೆ.
ಆ ಐದು ಜನ ಆರೋಪಿಯನ್ನು ಕಾಂಗ್ರೆಸ್ ಸರ್ಕಾರ ಯಾವಾಗ ಅರೆಸ್ಟ್ ಮಾಡುತ್ತೀರಿ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಕಾಂಗ್ರೆಸ್ ಸರ್ಕಾರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.
ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಸದಸ್ಯ ನಿರಂಜನ ಹಿರೇಮಠ ಅವರ ಪುತ್ರಿ ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿ ಕಳೆದ ಮೂರು ದಿನಗಳಿಂದ ಮುನವಳ್ಳಿಯಲ್ಲಿ ನಡೆಯುತ್ತಿದ್ದ ಬೃಹತ್ ಪ್ರತಿಭಟನೆಯಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ ಭಾಗವಹಿಸಿ, ಪ್ರತಿಭಟನಾಕಾರರಿಗೆ ಸಾಥ್ ನೀಡಿದರು.
ಬಳಿಕ ಮಾತನಾಡಿದ ಅವರು, ಹುಬ್ಬಳ್ಳಿಯಲ್ಲಿ ನಡೆದ ಘಟನೆ ರಾಕ್ಷಸಿ ಪ್ರವೃತ್ತಿಯ ಘಟನೆ ಆಗಿದೆ. ಹಾಡಹಗಲೇ ಕಾಲೇಜಿನಲ್ಲಿ ಚಾಕುವಿನಿಂದ ಇರಿದು ವಿದ್ಯಾರ್ಥಿನಿಯನ್ನು ಕೊಂದು ಹಾಕಿದ್ದು ಎಲ್ಲರೂ ಖಂಡಿಸಬೇಕು.
ಮುನವಳ್ಳಿಯಲ್ಲಿನ ಪ್ರತಿಭಟನೆ ಬಿಸಿ ಇಡೀ ರಾಜ್ಯಕ್ಕೆ ಹೋಗುತ್ತಿದೆ. ದೆಹಲಿಯಲ್ಲಿ ಇದೇ ರೀತಿ ಘಟನೆ ನಡೆದಿತ್ತು, ಈಗ ಹುಬ್ಬಳ್ಳಿಯಲ್ಲಿ ನಡೆದಿದೆ.
ಇಂಥದ್ದೊಂದು ಗುಂಪಿಗೆ ತರಬೇತಿ ನೀಡಲಾಗಿದೆಯಾ ಅನ್ನೋ ಅನುಮಾನ ಮುಡುತ್ತಿದೆ ಎಂದು ಅನುಮಾನ ವ್ಯಕ್ತ ಪಡಿಸಿದರು.
ಸಿಎಂ, ಡಿಸಿಎಂ ವೈಯಕ್ತಿಕ ಕಾರಣಕ್ಕೆ ಕೊಲೆ ಆಗಿದೆ ಅಂತಾರೆ. ಆದರೆ ಕಾಂಗ್ರೆಸ್ ಪಾಲಿಕೆ ಸದಸ್ಯನೇ ಹೇಳುವ ಪ್ರಕಾರ ಇದು ಲವ್ ಜಿಹಾದ್ ಕೇಸ್ ಆಗಿದೆ. ಈ ವರೆಗೂ ಸಿಎಂ, ಡಿಸಿಎಂ, ಗೃಹಸಚಿವರು ಬಂದು ಯುವತಿ ಕುಟುಂಬಕ್ಕೆ ಸಾಂತ್ವಾನ ಯಾಕೆ ಹೇಳಿಲ್ಲ. ನೀವು ಒಂದು ಹೆಲಿಕಾಪ್ಟರ್ ತಗೊಂಡು ಹುಬ್ಬಳ್ಳಿಗೆ ಯಾಕೆ ಬರಲಿಲ್ಲ. ಅದೇ ಮುಸ್ಲಿಂ ಮಹಿಳೆಗೆ ಈ ರೀತಿ ಆಗಿದ್ರೆ ವಿಶೇಷ ವಿಮಾನ ತಗೊಂಡು ಬರುತ್ತಿದ್ದರಿ. ಆರೋಪಿ ವಿರುದ್ಧ ಕ್ರಮ ಕೈಗೊಳ್ಳಲು ನಿಮಗೆ ಗಡ್ಸ್ ಇಲ್ವಾ ಎಂದು ಕಾಂಗ್ರೆಸ್ ಸರ್ಕಾರ ವಿರುದ್ಧ ಗುಡಗಿದರು.
ನಿಮ್ಮ ತುಷ್ಟಿಕರಣ ನೀತಿ ನಿಲ್ಲಿಸಿ, ಇಲ್ಲ ಜನ ನಿಮ್ಮನ್ನು ಅಟ್ಟಾಡಿಸಿ ಹೊಡೆಯುವ ಪರಿಸ್ಥಿತಿ ಬರುತ್ತೆ. ಕೇರಳದ ವಯನಾಡ್ ನಲ್ಲಿ ಮುಸ್ಲಿಮರು ಜಾಸ್ತಿ ಇರೋದಕ್ಕೆ ಅಲ್ಲಿಗೆ ಹೋಗಿ ರಾಹುಲ್ ಗಾಂಧಿ ಚುನಾವಣೆ ಸ್ಪರ್ಧೆ ಮಾಡುತ್ತಾರೆ.
ರಾಜ್ಯದ'ಲ್ಲಿ ಮಹಿಳೆಯರು ಸ್ಕೂಲ್, ಕಾಲೇಜಿಗೆ ಹೋಗುವ ಪರಿಸ್ಥಿತಿ ಉಳಿದಿಲ್ಲ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಉಳಿದಿಲ್ಲ. ಇನ್ನೂಳಿದ ಐದು ಜನರನ್ನು ಅರೆಸ್ಟ್ ಮಾಡಿ ಎನ್ಕೌಂಟರ್ ಮಾಡುವ ಕೆಲಸ ಮಾಡಿ. ಯಾವಾಗ ಕಾಂಗ್ರೆಸ್ ಸರ್ಕಾರ ಬರುತ್ತೆ, ಆಗ ಹಿಂದು ಸಮಾಜಕ್ಕೆ ತೊಂದರೆ ಕೊಡುವ ಕೆಲಸ ನಡೆದಿದೆ. ಲವ್ ಜಿಹಾದ್ ಅನ್ನೋದು ನಿರಂತರವಾಗಿ ನಡೆಯುತ್ತಿದೆ ಎಂದು ಜಗದೀಶ್ ಶೆಟ್ಟರ್ ವಾಗ್ದಾಳಿ ನಡೆಸಿದರು.
ಪ್ರತಿಭಟನೆ ನಡೆದ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ ಪಾಟೀಲ, ಮಂಡಲ ಅಧ್ಯಕ್ಷರಾದ ಈರಣ್ಣ ಚಂದ್ರಗಿ, ಪ್ರಮುಖರಾದ ಮಲ್ಲಣ್ಣ ಯಾದವಾಡ, ನರಸಿಂಹ ಕುಲಕರ್ಣಿ, ವಿಜಯ ಅವಟೆ, ಸುಭಾಷ ಗದ್ದಿಗೌಡ್ರ, ಪಂಚನಗೌಡ ದ್ಯಾಮಣ್ಣಗೌಡ್ರ, ಸೌರಭ ಚೋಪ್ರಾ ಸೇರಿದಂತೆ ಅನೇಕ ಜನ ಉಪಸ್ಥಿತರಿದ್ದರು

## ಚುನಾವಣೆ ಸಿದ್ಧತೆ, ವಿವಿಧ ಕಾರ್ಯಗಳ ಮಾಹಿತಿ ಪಡೆದ ಚುನಾವಣಾ ಸಾಮಾನ್ಯ ವೀಕ್ಷಕರು, ವೆಚ್ಚ ವೀಕ್ಷಕರು

### ವಿವಿಧ ತಂಡಗಳನ್ನೊಳಗೊಡಿ ಚುನಾವಣಾ ಕಾರ್ಯ ಯಶಸ್ವಿಗೊಳಿಸಲು ಕರೆ-ಸಾಮಾನ್ಯ ವೀಕ್ಷಕ ಚಂದ್ರಶೇಖರ ಸಖಮುರಿ



ಬಳ್ಳಾರಿ,ಏ..ಜಗತ್ತಿನ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ದೇಶವಾಗಿರುವ ನಮ್ಮ ಹೆಮ್ಮೆಯ ಭಾರತದಲ್ಲಿ ನಡೆಯುತ್ತಿರುವ ಪ್ರಸ್ತುತ ಲೋಕಸಭಾ ಚುನಾವಣೆಯು ನಮ್ಮ ದೇಶದ ಹೆಮ್ಮೆಯಾಗಿದ್ದು, ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಚುನಾವಣೆ ನಡೆಸಲು ಅಧಿಕಾರಿಗಳನ್ನು ಒಳಗೊಂಡಿರುವ ವಿವಿಧ ತಂಡಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಿ ಚುನಾವಣಾ ಕಾರ್ಯವನ್ನು ಯಶಸ್ವಿಗೊಳಿಸಬೇಕು ಎಂದು ಬಳ್ಳಾರಿ ಲೋಕಸಭೆ ಚುನಾವಣೆಯ ಸಾಮಾನ್ಯ ವೀಕ್ಷಕ ಚಂದ್ರಶೇಖರ ಸಖಮುರಿ ಅವರು ಕರೆ ನೀಡಿದರು.
ಶುಕ್ರವಾರದಂದು, ಬಳ್ಳಾರಿ ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಚುನಾವಣೆ ಸಿದ್ಧತೆ ಕುರಿತು ಎಲ್ಲಾ ಸಹಾಯಕ ಚುನಾವಣಾಧಿಕಾರಿಗಳು, ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.
ಮತದಾರರು ಮುಕ್ತವಾಗಿ ಮತದಾನ ಮಾಡಲು ಶಾಂತಿಯುತ, ಸುವ್ಯವಸ್ಥಿತವಾದ ವಾತಾವರಣ ರೂಪಿಸಬೇಕು. ಈ ನಿಟ್ಟಿನಲ್ಲಿ ಎಲ್ಲಾ ಸಹಾಯಕ ಚುನಾವಣಾಧಿಕಾರಿಗಳು, ವಿವಿಧ ಸಮಿತಿಯ ನೋಡೆಲ್ ಅಧಿಕಾರಿಗಳು ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳು ಚುನಾವಣಾ ಆಯೋಗ ನಿರ್ದೇಶನದನ್ವಯ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.
ಚುನಾವಣೆ ಕಾರ್ಯಕ್ಕೆ ಎಲ್ಲ ನಿಯೋಜಿತ ಅಧಿಕಾರಿಗಳು ತರಬೇತಿ ಹೊಂದಿದ್ದು, ಉತ್ತಮ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕು. ಈ ಕುರಿತು ಚುನಾವಣೆಯ ಎಲ್ಲ ಕಾರ್ಯ ಸಿದ್ದತೆಗಳನ್ನು ನಿಯಮಾನುಸಾರ ಪರಿಶೀಲಿಸಬೇಕು ಎಂದು ನಿರ್ದೇಶನ ನೀಡಿದರು.
ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಮತಗಟ್ಟೆ ಕೇಂದ್ರಗಳಲ್ಲಿ ಕನಿಷ್ಟ ಮೂಲ ಸೌಲಭ್ಯಗಳ ಸಿದ್ದತೆಗಳನ್ನು ಖಚಿತಪಡಿಸಿಕೊಳ್ಳಬೇಕು. ಮತದಾರರ ಸಂಖ್ಯೆಗೆ ಅನುಗುಣವಾಗಿ ಮತಗಟ್ಟೆಗಳಲ್ಲಿ ಮೂಲಸೌಲಭ್ಯಗಳನ್ನು ಒದಗಿಸಲು ಇನ್ನೂ ಸಾಕಷ್ಟು ಕಾಲಾವಕಾಶ ನಮ್ಮಲ್ಲಿ ಇದೆ. ಈ ಕುರಿತು ಸಹಾಯಕ ಚುನಾವಣಾಧಿಕಾರಿಗಳು ಆಸಕ್ತಿ ವಹಿಸಿ ಸೂಕ್ತ ಕ್ರಮ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.ಮೂಲಭೂತ ಸೌಕರ್ಯಗಳಿಗೆ ಆದ್ಯತೆ ನೀಡಿ:- ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಬೆಳಕು, ನೆರಳು, ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ, ಹಿರಿಯ ನಾಗರಿಕರು ಮತ್ತು ವಿಶೇಷಚೇತನರಿಗೆ ರ್ಯಾಂಪ್, ವೀಲ್‌ಚೇರ್ ಹಾಗೂ ಇತರೆ ವ್ಯವಸ್ಥೆಯನ್ನು ಮತದಾರರ ಸಂಖ್ಯೆಗೆ ಅನುಗುಣವಾಗಿ ಕೈಗೊಳ್ಳಬೇಕು ಎಂದು ನಿರ್ದೇಶಿಸಿದೆ. ಈ ನಿಟ್ಟಿನಲ್ಲಿ ಆಯಾ ಕ್ಷೇತ್ರದ ಎಆರ್‌ಓಗಳು ಮೂಲಭೂತ ಸೌಕರ್ಯಗಳು ಸುಸ್ಥಿತಿಯಲ್ಲಿವೆಯೇ ಎಂಬುದನ್ನು ಪರಿಶೀಲಿಸಬೇಕು. ಇಲ್ಲದಿದ್ದಲ್ಲಿ ಅಗತ್ಯ ವ್ಯವಸ್ಥೆ ಮಾಡಿಕೊಳ್ಳಬೇಕು. ಉತ್ತಮ ಸೌಲಭ್ಯಗಳು ಮತದಾರರನ್ನು ಸೆಳೆಯಲು ಸಹಕಾರಿಯಾಗುತ್ತವೆ ಎಂದರು.ಆಯಾ ವಿಧಾನಸಭಾ ಕ್ಷೇತ್ರಗಳಲ್ಲಿ ಎಫ್‌ಎಸ್‌ಟಿ, ಎಸ್‌ಎಸ್‌ಟಿ ಹಾಗೂ ವಿವಿಟಿ ತಂಡಗಳು ತಮ್ಮ ಕಾರ್ಯಗಳನ್ನು ಚುರುಕುಗೊಳಿಸಬೇಕು. ಚುನಾವಣಾ ಅಕ್ರಮಗಳ ಮೇಲೆ ನಿಗಾವಹಿಸ ಬೇಕು. ಅದರಂತೆಯೇ ಇತರೆ ಸಮಿತಿಗಳೂ ಕಾರ್ಯಪ್ರವೃತ್ತರಾಗಬೇಕು ಎಂದು ಹೇಳಿದರು.ವಿವಿಧ ಸಮಿತಿಗಳನ್ನೊಳಗೊಂಡಂತೆ ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡ ಎಲ್ಲಾ ಅಧಿಕಾರಿಗಳು ಸಮನ್ವಯತೆಯಿಂದ ಕೂಡಿ ಕಾರ್ಯನಿರ್ವಹಿಸಿದರೆ ಚುನಾವಣೆ ಕಾರ್ಯವನ್ನು ಯಶಸ್ಸುಗೊಳಿಸಲು ಸಾಧ್ಯ ಎಂದು ಮನವರಿಕೆ ಮಾಡಿದರು.
ಚುನಾವಣಾ ಅಕ್ರಮಗಳನ್ನು ತಡೆಗಟ್ಟಲು ಸ್ಥಾಪಿಸಲಾಗಿರುವ ಚೆಕ್ ಪೋಸ್ಟ್‌ಗಳಲ್ಲಿ ಸಿಬ್ಬಂದಿಗಳು ಸಮರ್ಪಕವಾಗಿ ವಾಹನಗಳ ತಪಾಸಣೆ ನಡೆಸಬೇಕು. ಅಕ್ರಮ ಹಣ ಅಥವಾ ಸಾಮಗ್ರಿಗಳನ್ನು ಯಾವ ಯಾವ ರೀತಿಯಲ್ಲಿ ಸಾಗಿಸಬಹುದು ಎಂಬುದರ ಬಗ್ಗೆ ತಪಾಸಣಾ ಸಿಬ್ಬಂದಿಗಳಿಗೂ ತಿಳಿದಿರಬೇಕು. ಕೇವಲ ನೆಪ ಮಾತ್ರಕ್ಕೆ ತಪಾಸಣೆ ಮಾಡುವುದು ಸರಿಯಾದ ಕ್ರಮವಲ್ಲ ಎಂದರು.
ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ಬಳ್ಳಾರಿ ಲೋಕಸಭೆ ಮತಕ್ಷೇತ್ರದಲ್ಲಿ ಸಾರ್ವತ್ರಿಕ ಚುನಾವಣೆಯು ಶಾಂತಿಯುತ, ಮುಕ್ತ, ನ್ಯಾಯಸಮ್ಮತವಾಗಿ ಜರುಗಿಸಲು ಕೈಗೊಂಡಿರುವ ಕ್ರಮಗಳನ್ನು ವಿವರಿಸಿದರು.09-ಬಳ್ಳಾರಿ ಲೋಕಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಏ.19 ರ ಮತದಾರರ ಪಟ್ಟಿಯನ್ವಯ ಒಟ್ಟು 18,84,040 ಮತದಾರರಿದ್ದು, 9,28,857 ಪುರುಷ ಮತದಾರರು, 9,54,914 ಮಹಿಳಾ ಮತದಾರರು ಮತ್ತು 269 ಲಿಂಗತ್ವ ಅಲ್ಪ ಸಂಖ್ಯಾತ ಮತದಾರರಿದ್ದಾರೆ. ಒಟ್ಟು 1925 ಮತಗಟ್ಟೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.
ಎಫ್ಎಸ್‌ಟಿ, ಇವಿಎಂ ತಂಡಗಳು, ಅಬಕಾರಿ ಇಲಾಖೆ, ಕಂಪ್ಲೈಂಟ್ ಮಾನಿಟರಿಂಗ್ ತಂಡ, ಸೆಕ್ಟರ್ ಅಧಿಕಾರಿಗಳು, ಎಂಸಿಸಿ ತಂಡ, ಎಂಸಿಎಂಸಿ ಮತ್ತು ಬಿಎಲ್‌ಓಗಳಿಗೆ ಈಗಾಗಲೇ ತರಬೇತಿ ನೀಡಲಾಗಿದೆ. ಮತಗಟ್ಟೆ ಅಧಿಕಾರಿಗಳಿಗೆ ಮೊದಲ ಹಂತದ ತರಬೇತಿ ನೀಡಲಾಗಿದೆ. ಎಂಸಿಎಂಸಿ ಹಾಗೂ ಪೇಯ್ಡ್ ನ್ಯೂಸ್ ಕುರಿತಂತೆ ಮಾಧ್ಯಮದವರಿಗೆ ಕಾರ್ಯಾಗಾರ ಆಯೋಜಿಸಿ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.
ಅಂಚೆ ಮತದಾನ ಸೇವೆಯಡಿ 85 ವರ್ಷಕ್ಕೂ ಮೇಲ್ಪಟ್ಟ 13,387 ಮತದಾರರ ಪೈಕಿ 663 ಮತದಾರರು, 24,512 ವಿಶೇಷಚೇತನ ಮತದಾರರಲ್ಲಿ 452 ಮತದಾರರು ಮನೆಯಲ್ಲಿಯೇ ಮತದಾನ ಮಾಡಲು ಬಯಸಿ ನೋಂದಾಯಿಸಿಕೊಂಡಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾಹಿತಿ ನೀಡಿದರು.ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾದಾಗಿನಂದ ಇಲ್ಲಿಯವರೆಗೆ ವಿವಿಧ ಚೆಕ್ ಪೋಸ್ಟ್‌ಗಳಲ್ಲಿ ವಾಹನಗಳ ತಪಾಸಣಾ ಸಮಯದಲ್ಲಿ ದಾಖಲೆರಹಿತ ಮತ್ತು ಚುನಾವಣಾ ಅಕ್ರಮಗಳಿಗೆ ಬಳಸಬಹುದಾದ ಸಂಶಯದ ಆಧಾರದಲ್ಲಿ ಪತ್ತೆಯಾದ ರೂ.6,09,94,580 ನಗದು, ರೂ.10,16,901 ಮೌಲ್ಯದ 2456.39 ಲೀಟರ್ ಮದ್ಯ, 1.569 ಕೆ.ಜಿ (ರೂ.54,500 ಮೊತ್ತದ) ಡ್ರಗ್ಸ್, 200.33 ಕೆ.ಜಿ (ರೂ.1,53,37,240 ಮೊತ್ತದ) ಬಂಗಾರ, ಬೆಳ್ಳಿ ಆಭರಣ ಮತ್ತು ರೂ. ರೂ.38,92,844 ಮೌಲ್ಯಗಳ ಕುಕ್ಕರ್, ಸೀರೆ, ಇತರೆ ಸೇರಿದಂತೆ ವಿವಿಧ ರೀತಿಯ ಉಚಿತ ಕೊಡುಗೆಗಳ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಇಲ್ಲಿಯವರೆಗೆ ದಾಖಲೆರಹಿತ ಮತ್ತು ಸಂಶಯಾಸ್ಪದವಾಗಿ ಹೊಂದಿದ್ದ ನಗದು ಹಣ, ವಸ್ತುಗಳು ಸೇರಿದಂತೆ ಒಟ್ಟು ರೂ.8,12,96,065 ಗಳ ಹಣವನ್ನು ಜಪ್ತಿ ಮಾಡಿ, ಚುನಾವಣಾ ಆಯೋಗದ ನಿರ್ದೇಶನದಂತೆ ನಿಯಮಾನುಸಾರ 429 ಪ್ರಕರಣ ದಾಖಲಿಸಿ ಅಗತ್ಯ ಕ್ರಮ ಜರುಗಿಸಲಾಗಿದೆ ಎಂದು ವಿವರಿಸಿದರು.
ಈ ಬಾರಿ ಮಹಿಳಾ ಅಧಿಕಾರಿ, ಸಿಬ್ಬಂದಿಗಳನ್ನು ಹೊಂದಿರುವ 40 ಮತಗಟ್ಟೆಗಳು, ಯುವ ಅಧಿಕಾರಿ, ಸಿಬ್ಬಂದಿ ಇರುವ 08 ಮತಗಟ್ಟೆಗಳು, ವಿಕಲಚೇತನ ಅಧಿಕಾರಿ, ಸಿಬ್ಬಂದಿ ಹೊಂದಿರುವ 08 ಮತಗಟ್ಟೆಗಳು ಹಾಗೂ ವಿಶಿಷ್ಟ ಥೀಮ್ ಆಧಾರಿತ ಮಾದರಿಯ 08 ಮತಗಟ್ಟೆಗಳನ್ನು ಸ್ಥಾಪಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.
ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು ಅವರು ಮಾತನಾಡಿ, ಎಂಸಿಸಿ ಉಲ್ಲಂಘನೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಒಟ್ಟು 25 ಪ್ರಕರಣ ದಾಖಲಾಗಿವೆ. ಪೊಲೀಸ್, ಎಫ್‌ಎಸ್‌ಟಿ ಮತ್ತು ಎಫ್‌ಎಸ್‌ಟಿ ಅಧಿಕಾರಿಗಳಿಂದ 58, ಅಬಕಾರಿ ಇಲಾಖೆಯಿಂದ 267 ಪ್ರಕರಣ ದಾಖಲಿಸಲಾಗಿದೆ.
ಈ ಹಿಂದಿನ ಘಟನೆಗಳು ಹಾಗೂ ಸಂಗತಿಗಳನ್ನು ಆಧರಿಸಿ, ಅಧಿಕಾರಿಗಳಿಂದ ವರದಿ ಪಡೆದು ಸೂಕ್ಷ್ಮ, ಸಾಮಾನ್ಯ ಮತಗಟ್ಟೆಗಳನ್ನು ಗುರುತಿಸಲಾಗಿದೆ ಎಂದು ತಿಳಿಸಿದರು.ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ ಅವರು ಮಾತನಾಡಿ, ಕಳೆದ ಲೋಕಸಭೆ ಚುನಾವಣೆಯಲ್ಲಿ ಶೇ.63.05 ರಷ್ಟು ಮತದಾನವಾಗಿತ್ತು. ಈ ಬಾರಿ ಮತದಾನ ಪ್ರಮಾಣ ಹೆಚ್ಚಿಸಲು ಮತದಾರರಲ್ಲಿ ಮತದಾನದ ಮಹತ್ವ ಅರಿಯುವಂತೆ ಮಾಡುವ ನಿಟ್ಟಿನಲ್ಲು ಸ್ವೀಪ್ ಕಾರ್ಯಕ್ರಮ ದಡಿ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಮಟ್ಟಗಳಲ್ಲಿಯೂ ಸಾಕಷ್ಟು ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಏ.21 ರಂದು ಬಳ್ಳಾರಿ ನಗರದಲ್ಲಿ ಬೃಹತ್ ಪ್ರಮಾಣದಲ್ಲಿ ಮ್ಯಾರಥಾನ್ ಕಾರ್ಯಕ್ರಮ ಆಯೋಜಿಸಿದೆ, ಈ ಸಂದರ್ಭದಲ್ಲಿ ಎಲ್ಲ ಚುನಾವಣಾ ವೀಕ್ಷಕರು ಪಾಲ್ಗೊಳ್ಳುವಂತೆ ಆಹ್ವಾನ ನೀಡಿದರು.
ಈ ಸಂದರ್ಭದಲ್ಲಿ ಬಳ್ಳಾರಿ ಲೋಕಸಭೆ ಚುನಾವಣಾ ವೆಚ್ಚ ವೀಕ್ಷಕರಾದ ಕೆ.ಕೃಷ್ಣಮೂರ್ತಿ, ಕೆ.ಸುರೇಂದ್ರ ಪೌಲ್ ಸೇರಿದಂತೆ ವಿವಿಧ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿಗಳು, ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳು ಮತ್ತು ಜಿಲ್ಲಾ ಚುನಾವಣಾ ಕಚೇರಿಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

### * * * * ವಿಡಿಯೋ ಕಾನ್ಫರೆನ್ಸ್ ಮೂಲಕ ಬರ ನಿರ್ವಹಣೆ ಸಭೆ * * * *

## ಕುಡಿಯುವ ನೀರಿನ ಪೂರೈಕೆಗೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳಲಾಗಿದೆ: ನಲಿನ್ ಅತುಲ್



ಕೊಪ್ಪಳ, ಏಪ್ರಿಲ್ 20 : ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ಕೊರತೆ ಇಲ್ಲ. ಕುಡಿಯುವ ನೀರಿನ ಪೂರೈಕೆಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆ, ಸರ್ಕಾರಿ ಬೋರ್‌ವೆಲ್‌ಗಳು, ಖಾಸಗಿ ಬೋರ್‌ವೆಲ್‌ಗಳು ಹಾಗೂ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಹೇಳಿದರು.
ಶುಕ್ರವಾರದಂದು ಜಿಲ್ಲೆಯ ತಹಶೀಲ್ದಾರರು, ಕಾರ್ಯ ನಿರ್ವಾಹಕ ಅಧಿಕಾರಿಗಳು, ನಗರಸಭೆ, ಪುರಸಭೆ ಅಧಿಕಾರಿಗಳು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ ಅವರು ಮಾತನಾಡಿದರು.
ಜಿಲ್ಲೆಯಲ್ಲಿ ಒಟ್ಟು 153 ಗ್ರಾಮ ಪಂಚಾಯತಿಗಳಿದ್ದು, 722 ಗ್ರಾಮಗಳಿರುತ್ತವೆ. ಈ ಗ್ರಾಮಗಳಲ್ಲಿ 430 ಗ್ರಾಮಗಳಿಗೆ ಡಿಬಿಒಟಿ, ಎಂವಿಎಸ್ ಯೋಜನೆ ಮುಖಾಂತರ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ 2334 ಸರ್ಕಾರಿ ಮತ್ತು 6366 ಖಾಸಗಿ ಬೋರ್‌ವೆಲ್‌ಗಳಿದ್ದು ಇದರಲ್ಲಿ 898 ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿದ್ದು, ಅದರಲ್ಲಿ 150 ಸದರಿ ಖಾಸಗಿ ಬೋರ್‌ವೆಲ್‌ಗಳ ಮಾಲೀಕರಿಂದ ಕರಾರು ಪತ್ರವನ್ನು ಮಾಡಿಸಿಕೊಂಡಿರುತ್ತೇವೆ. ಜಿಲ್ಲೆಯ ನಲೋಗಿಪುರ ಜಾಕ್‌ವೆಲ್‌ಗೆ ಭದ್ರಾ ಜಲಾಶಯದಿಂದ ನೀರು ಬಿಡುಗಡೆ ಮಾಡಿದ್ದು, ನಲೋಗಿಪುರ ಜಾಕ್‌ವೆಲ್‌ನಲ್ಲಿ ಅಂದಾಜು 0.0357 ಟಿ.ಎಂ.ಸಿ ನೀರನ್ನು ಸಂಗ್ರಹಣೆ ಮಾಡಿಟ್ಟುಕೊಳ್ಳಲಾಗಿದೆ. ಈ ಜಾಕ್‌ವೆಲ್‌ನಿಂದ ಒಟ್ಟು 31 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತದೆ. ಮೇ ಕೊನೆಯ ವಾರದವರೆಗೂ ಈ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಬರುವುದಿಲ್ಲ. ಕೊಪ್ಪಳ ತಾಲೂಕಿನ 14 ಗ್ರಾಮಗಳಾದ ಅಳವಂಡಿ, ಕಂಪ್ಲಿ, ಗಟ್ಟಿರೆಡ್ಡಿಹಾಳ, ಗುಡಗೇರಿ, ಕೆಸಲಾಪುರ, ಹಲವಾಗಲಿ, ನಲೋಗಿಪುರ, ಭೈರಾಪುರ, ಹಟ್ಟಿ, ಹೈದರನಗರ, ರಘುನಾಥನಹಳ್ಳಿ, ಬೆಳಗಟ್ಟಿ, ಮುರ್ಲಾಪುರ ಮತ್ತು ಕವಲೂರ, ಕುಕನೂರ ತಾಲೂಕಿನ 17 ಗ್ರಾಮಗಳಾದ ಬನ್ನಿಕೊಪ್ಪ, ಮನ್ನಾಪುರ, ನಂಗಾಪುರ, ಮಳೆಕೊಪ್ಪ, ಮಂಡಲಗಿರಿ, ಕುಕನೂರು, ದ್ಯಾಂಪುರ, ಆಡೂರು, ರಾಜೂರು, ಮಸಬಹಂಚಿನಾಳ, ತಳಕಲ್, ತಳಬಾಳ, ಲಕಮಾಪುರ, ಕುಂಬಳಾಪುರ, ಚಿತ್ತಾಪುರ ಮತ್ತು ಇಟಗಿ ಗ್ರಾಮಗಳಲ್ಲಿ ಬಹುಗ್ರಾಮದಡಿಯಲ್ಲಿ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.
ಜಿಲ್ಲೆಯಲ್ಲಿ 32 ಗ್ರಾಮ ಪಂಚಾಯತ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುತ್ತದೆ. ಜಿಲ್ಲೆಯ ಕೊಪ್ಪಳ ಮತ್ತು ಕುಕನೂರು ತಾಲೂಕಿನಲ್ಲಿ 4 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಅಲ್ಲಿ 5 ಟ್ಯಾಂಕರ್‌ನಂದ ಪ್ರತಿ ದಿನ ಸರಾಸರಿ 4-5 ಟ್ರಿಪ್ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ ಮತ್ತು 48 ಗ್ರಾಮಗಳಲ್ಲಿ 55 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಆಧಾರದ ಮೇಲೆ ಪಡೆಯಲಾಗಿರುತ್ತದೆ. ಅಲ್ಲದೆ ಗ್ರಾಮೀಣ ಮಟ್ಟದಲ್ಲಿ ಅತಿಯಾಗಿ ಕುಡಿಯುವ ನೀರಿನ ಸಮಸ್ಯೆಯಾದರೆ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಿಕೊಳ್ಳಲು ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ ಬಿಡುಗಡೆಯಾದ ಅನುದಾನದಲ್ಲಿ ರೂ. 25.00 ಲಕ್ಷಗಳನ್ನು ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡುವ ಸಲುವಾಗಿ ಮೀಸಲಿರಿಸಲಾಗಿದೆ ಹಾಗೂ 7 ತಾಲೂಕಿನ ತಹಶೀಲ್ದಾರರ ಪಿ.ಡಿ ಖಾತೆಯಲ್ಲಿ ಸಹ ತುರ್ತು ಕುಡಿಯುವ ನೀರಿನ ಸರಬರಾಜು ಸಲುವಾಗಿ ತಲಾ ರೂ. 50.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ ಎಂದು ಸ್ಥಳೀಯ ಸಂಸ್ಥೆಯ ಮುಖ್ಯಾಧಿಕಾರಿಗಳು ತಿಳಿಸಿರುತ್ತಾರೆ. ಹೀಗಾಗಿ ಜಿಲ್ಲಾಡಳಿತದಿಂದ ಕುಡಿಯುವ ನೀರು ಸಲುವಾಗಿ ಎಲ್ಲಾ ರೀತಿಯಿಂದ ತಯಾರಿ ಮಾಡಿ ಇಟ್ಟುಕೊಳ್ಳಲಾಗಿದೆ. ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಯಲ್ಲಿ ರೂ. 19.55 ಕೋಟಿ ಅನುದಾನ ಲಭ್ಯವಿರುತ್ತದೆ ಮತ್ತು ಪ್ರತಿ ಸ್ಥಳೀಯ ಸಂಸ್ಥೆಗಳಲ್ಲಿ 20 ರಿಂದ 30 ಲಕ್ಷಗಳನ್ನು ಕುಡಿಯುವ ನೀರಿಗಾಗಿ ಅನುದಾನವನ್ನು ಮೀಸಲು ಇರಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.
ಮೇವು ಕಿಟ್ ವಿತರಣೆ: ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ 6 ಮಿ.ಮಿ ಮಳೆಯಾಗಿರುತ್ತದೆ. ಸದ್ಯಕ್ಕೆ ಮೇವಿನ ಸಮಸ್ಯೆ ಇರುವುದಿಲ್ಲ ಹಾಗೂ ಪ್ರಾಣಿಗಳಿಗೆ ಕುಡಿಯುವ ನೀರಿನ ಸಮಸ್ಯೆ ಇರುವುದಾಗಿ ಎಲ್ಲೂ ವರದಿಯಾಗಿಲ್ಲ. ಜಿಲ್ಲೆಯಲ್ಲಿ 5,45,380.97 ಮೆಟ್ರಿಕ್ ಟನ್ ಮೇವು ಲಭ್ಯವಿದ್ದು ಇನ್ನೂ 36 ವಾರಕ್ಕೆ ಸಾಕಾಗುವಷ್ಟು ಮೇವು ಲಭ್ಯವಿರುತ್ತದೆ.

(2 ನೇ ಪುಟಕ್ಕೆ)